# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1353
**ಸದಸ್ಯರ ಹೆಸರು** : ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧನಸಭಾ ಕ್ಷೇತ್ರದಿಂದ ಚುನಾಯಿತರಾದವರು)
**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
**ಉತ್ತರಿಸಬೇಕಾದ ದಿನಾಂಕ** : 22.08.2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ; ಕಳೆದ ಎರಡು ವರ್ಷಗಳಲ್ಲಿ ಅಂಗನವಾಡಿಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು; (ಸಂಪೂರ್ಣ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಒಟ್ಟು 69922 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.<br><br>2023-24ನೇ ಸಾಲಿನಲ್ಲಿ 585 ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ರೂ.8099.00 ಲಕ್ಷ ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆಗೊಳಿಸಲಾಗಿದೆ. ಜಿಲ್ಲಾವಾರು ವಿವರವನ್ನು ಅನುಬಂಧ-1ರಲ್ಲಿ ಒದಗಿಸಿದೆ.<br><br>2024-25ನೇ ಸಾಲಿನಲ್ಲಿ 592 ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ರೂ.8500.00 ಲಕ್ಷ ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆಗೊಳಿಸಲಾಗಿದೆ.<br><br>ಜಿಲ್ಲಾವಾರು ವಿವರವನ್ನು ಅನುಬಂಧ-2ರಲ್ಲಿ ಒದಗಿಸಿದೆ. |
| ಆ) | ಅಂಗನವಾಡಿ ಕಾರ್ಯಕರ್ತೆಯರನ್ನು ನೇಮಕ ಮಾಡಿಕೊಳ್ಳಲು ಇರಬೇಕಾದ ಅರ್ಹತೆಗಳೇನು ಮತ್ತು ಮಾನದಂಡಗಳಾವುವು; | ದಿನಾಂಕ:03-12-2024ರ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರನ್ನು ಆಯ್ಕೆ ಮಾಡಲು ಹೊರಡಿಸಿರುವ ಪರಿಷ್ಕೃತ ಮಾರ್ಗಸೂಚಿಗಳ ಪ್ರತಿಯನ್ನು ಅನುಬಂಧ-3ರಲ್ಲಿ ಒದಗಿಸಿದೆ. |
| ಇ) | ಹೊಸದಾಗಿ ನಿರ್ಮಾಣ ಮಾಡುತ್ತಿರುವ ಅಂಗನವಾಡಿಗಳಲ್ಲಿ ಮಕ್ಕಳನ್ನು ಆಕರ್ಷಿಸಲು ಹೊಸ ವಿನ್ಯಾಸವನ್ನು ಅಳವಡಿಸುವ ಕುರಿತು ಸರ್ಕಾರ ಚಿಂತಿಸಿದೆಯೇ; ಇದ್ದಲ್ಲಿ, ಮಾಹಿತಿ ಒದಗಿಸುವುದು; | ಹೊಸದಾಗಿ ನಿರ್ಮಾಣ ಮಾಡುತ್ತಿರುವ ಅಂಗನವಾಡಿಗಳಲ್ಲಿ ಮಕ್ಕಳನ್ನು ಆಕರ್ಷಿಸಲು ಹೊಸ ವಿನ್ಯಾಸವನ್ನು ಅಳವಡಿಸುವ ಕುರಿತು ಈಗಾಗಲೇ ಕ್ರಮಕೈಗೊಳ್ಳಲಾಗಿದೆ.<br><br>ಹೊಸದಾಗಿ ಅಂಗನವಾಡಿ ಕಟ್ಟಡ ನಿರ್ಮಾಣ ಮಾಡುತ್ತಿರುವ ಸಂದರ್ಭಗಳಲ್ಲಿ, ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ನಿಗದಿಪಡಿಸಿದ ಘಟಕ ವೆಚ್ಚದೊಳಗೆ ಬಾಲಸ್ನೇಹಿ ಗೋಡೆ ಬರಹ, ಮಕ್ಕಳ ಸ್ನೇಹಿ ಶೌಚಾಲಯ ಹಾಗೂ ವಾಶ್ ಬೇಸಿನ್ ನ್ನುಕಡ್ಡಾಯವಾಗಿ ಅಳವಡಿಸಲು ಕ್ರಮವಹಿಸಲಾಗುತ್ತಿದೆ. |

........2

| | | |
|---|---|---|
| ಈ) | ರಾಜ್ಯದಲ್ಲಿ ಇರುವ ವೃದ್ಧಾಶ್ರಮಗಳ ಸಂಖ್ಯೆ ಎಷ್ಟು; ವೃದ್ಧಾಶ್ರಮಗಳಿಗೆ ನೀಡುತ್ತಿರುವ ಯೋಜನೆ/ಸೌಲಭ್ಯಗಳಾವುವು?<br>(ಜಿಲ್ಲಾವಾರು / ಯೋಜನೆ/ಸೌಲಭ್ಯವಾರು ಮಾಹಿತಿ ಒದಗಿಸುವುದು) | ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ ರಾಜ್ಯ ಅನುದಾನದಡಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ರಾಜ್ಯದಲ್ಲಿ ಜಿಲ್ಲೆಗೆ ಒಂದರಂತೆ ಪ್ರಸ್ತುತ 29 ವೃದ್ಧಾಶ್ರಮಗಳು ಹಾಗೂ ಪ್ರತಿ ಕಂದಾಯ ಉಪವಿಭಾಗಕ್ಕೆ ಒಂದರಂತೆ ಪ್ರಸ್ತುತ 36 ವೃದ್ಧಾಶ್ರಮಗಳು ಸೇರಿ ಒಟ್ಟು 65 ವೃದ್ಧಾಶ್ರಮಗಳು ಕಾರ್ಯನಿರ್ವಹಿಸುತ್ತಿವೆ. ಮಾಹಿತಿಯನ್ನು ಅನುಬಂಧ-4ರಲ್ಲಿ ಒದಗಿಸಿದೆ.<br><br>ಸದರಿ ವೃದ್ಧಾಶ್ರಮಗಳಲ್ಲಿ ಅರವತ್ತು ಮತ್ತು ಅದಕ್ಕೂ ಹೆಚ್ಚಿನ ವಯಸ್ಸಿನ ನಿರ್ಗತಿಕ ವೃದ್ಧರಿಗೆ ಉಚಿತ ಊಟ, ವಸತಿ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ಕಲ್ಪಿಸಲಾಗಿರುತ್ತದೆ. |

**ಸಂಖ್ಯೆ: ಮಮಇ 239 ಐಸಿಡಿ 2025**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು

ಅನುಬಂಧ-1

2023-24ನೇ ಸಾಲಿನಲ್ಲಿ ವಿವಿಧ ಯೋಜನೆಯ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆಯಾದ ಅನುದಾನದ ಜಿಲ್ಲಾವಾರು ವಿವರ

(ರೂ.ಲಕ್ಷಗಳಲ್ಲಿ)

| ಕ್ರ.ಸಂ. | ಜಿಲ್ಲೆಯ ಹೆಸರು | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಐಸಿಡಿಎಸ್-ನರೇಗಾ) | | ಅಂಗನವಾಡಿ ಕಟ್ಟಡಗಳು (ನಗರ) | | ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನ ನರೇಗಾ ಒಗ್ಗೂಡಿಸುವಿಕೆ | |
|---|---|---|---|---|---|---|---|
| | | ಮಂಜೂರು ಮಾಡಲಾದ ಅನುದಾನ | ಭೌತಿಕ ಗುರಿ | ಮಂಜೂರು ಮಾಡಲಾದ ಅನುದಾನ | ಭೌತಿಕ ಗುರಿ | ಮಂಜೂರು ಮಾಡಲಾದ ಅನುದಾನ | ಭೌತಿಕ ಗುರಿ |
| 1 | ಬೆಂಗಳೂರು (ನ) | 12.00 | 1 | 400.00 | 20 | 0.00 | 0 |
| 2 | ಬೆಂಗಳೂರು (ಗ್ರಾ) | 84.00 | 7 | 0.00 | 0 | 100.00 | 10 |
| 3 | ಚಿತ್ರದುರ್ಗ | 72.00 | 6 | 320.00 | 16 | 0.00 | 0 |
| 4 | ಕೋಲಾರ | 372.00 | 31 | 0.00 | 0 | 0.00 | 0 |
| 5 | ಶಿವಮೊಗ್ಗ | 144.00 | 12 | 0.00 | 0 | 100.00 | 10 |
| 6 | ತುಮಕೂರು | 0.00 | 0 | 619.00 | 31 | 0.00 | 0 |
| 7 | ಮೈಸೂರು | 192.00 | 16 | 200.00 | 10 | 40.00 | 4 |
| 8 | ಚಿಕ್ಕಮಗಳೂರು | 72.00 | 6 | 0.00 | 0 | 100.00 | 10 |
| 9 | ಮಂಗಳೂರು | 12.00 | 1 | 100.00 | 5 | 50.00 | 5 |
| 10 | ಹಾಸನ | 216.00 | 18 | 0.00 | 0 | 0.00 | 0 |
| 11 | ಮಡಿಕೇರಿ | 12.00 | 1 | 0.00 | 0 | 40.00 | 4 |
| 12 | ಮಂಡ್ಯ | 144.00 | 12 | 0.00 | 0 | 100.00 | 10 |
| 13 | ಬೆಳಗಾವಿ | 840.00 | 70 | 0.00 | 0 | 670.00 | 67 |
| 14 | ವಿಜಯಪುರ | 0.00 | 0 | 200.00 | 10 | 0.00 | 0 |
| 15 | ಧಾರವಾಡ | 60.00 | 5 | 140.00 | 7 | 0.00 | 0 |
| 16 | ಉತ್ತರ ಕನ್ನಡ | 96.00 | 8 | 120.00 | 6 | 0.00 | 0 |
| 17 | ಕಲಬುರಗಿ | 48.00 | 4 | 0.00 | 0 | 0.00 | 0 |
| 18 | ಬಳ್ಳಾರಿ | 0.00 | 0 | 620.00 | 31 | 0.00 | 0 |
| 19 | ಬೀದರ್ | 12.00 | 1 | 20.00 | 1 | 20.00 | 2 |
| 20 | ರಾಯಚೂರು | 0.00 | 0 | 40.00 | 2 | 0.00 | 0 |
| 21 | ಯಾದಗಿರಿ | 0.00 | 0 | 0.00 | 0 | 0.00 | 0 |
| 22 | ದಾವಣಗೆರೆ | 96.00 | 8 | 0.00 | 0 | 100.00 | 10 |
| 23 | ರಾಮನಗರ | 120.00 | 10 | 0.00 | 0 | 100.00 | 10 |
| 24 | ಚಿಕ್ಕಬಳ್ಳಾಪುರ | 96.00 | 8 | 180.00 | 9 | 0.00 | 0 |
| 25 | ಚಾಮರಾಜನಗರ | 24.00 | 2 | 20.00 | 1 | 80.00 | 8 |
| 26 | ಉಡುಪಿ | 48.00 | 4 | 0.00 | 0 | 100.00 | 10 |
| 27 | ಬಾಗಲಕೋಟೆ | 24.00 | 2 | 220.00 | 11 | 0.00 | 0 |
| 28 | ಗದಗ | 84.00 | 7 | 120.00 | 6 | 0.00 | 0 |
| 29 | ಹಾವೇರಿ | 120.00 | 10 | 20.00 | 1 | 0.00 | 0 |
| 30 | ಕೊಪ್ಪಳ | 0.00 | 0 | 140.00 | 7 | 0.00 | 0 |
| 31 | ವಿಜಯನಗರ | 0.00 | 0 | 20.00 | 1 | 0.00 | 0 |
| ರಾಜ್ಯದ ಒಟ್ಟು | | 3000.00 | 250 | 3499.00 | 175 | 1600.00 | 160 |

## ಅನುಬಂಧ -2

**2024-25ನೇ ಸಾಲಿನಲ್ಲಿ ವಿವಿಧ ಯೋಜನೆಯ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆಯಾದ ಅನುದಾನದ ಜಿಲ್ಲಾವಾರು ವಿವರ**

(ರೂ.ಲಕ್ಷಗಳಲ್ಲಿ)

| ಕ್ರ.ಸಂ. | ಜಿಲ್ಲೆಯ ಹೆಸರು | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಐಸಿಡಿಎಸ್-ನರೇಗಾ) | | ಅಂಗನವಾಡಿ ಕಟ್ಟಡಗಳು (ನಗರ) | |
|---|---|---|---|---|---|
| | | ಮಂಜೂರು ಮಾಡಲಾದ ಅನುದಾನ | ಮಂಜೂರಾದ ಅಂ.ಕೇಂದ್ರಗಳ ಸಂಖ್ಯೆ | ಮಂಜೂರು ಮಾಡಲಾದ ಅನುದಾನ | ಮಂಜೂರಾದ ಅಂ.ಕೇಂದ್ರಗಳ ಸಂಖ್ಯೆ |
| 1 | ಬಾಗಲಕೋಟೆ | 144.00 | 12 | 120.00 | 6 |
| 2 | ಬೆಂಗಳೂರು (ನ) | 120.00 | 10 | 200.00 | 10 |
| 3 | ಬೆಂಗಳೂರು (ಗ್ರಾ) | 60.00 | 5 | 60.00 | 3 |
| 4 | ಬಳ್ಳಾರಿ | 0.00 | 0 | 0 | 0 |
| 5 | ಬೀದರ | 156.00 | 13 | 0 | 0 |
| 6 | ಬೆಳಗಾವಿ | 836.00 | 70 | 1000.00 | 50 |
| 7 | ಚಾಮರಾಜನಗರ | 120.00 | 10 | 100.00 | 5 |
| 8 | ಚಿಕ್ಕಬಳ್ಳಾಪುರ | 120.00 | 10 | 40.00 | 2 |
| 9 | ಚಿಕ್ಕಮಗಳೂರು | 156.00 | 13 | 100.00 | 5 |
| 10 | ಚಿತ್ರದುರ್ಗ | 60.00 | 5 | 0.00 | 0 |
| 11 | ದಕ್ಷಿಣ ಕನ್ನಡ | 120.00 | 10 | 60.00 | 3 |
| 12 | ದಾವಣಗೆರೆ | 168.00 | 14 | 100.00 | 5 |
| 13 | ಧಾರವಾಡ | 120.00 | 10 | 40.00 | 2 |
| 14 | ಗದಗ | 96.00 | 8 | 100.00 | 5 |
| 15 | ಹಾಸನ | 84.00 | 7 | 40.00 | 2 |
| 16 | ಹಾವೇರಿ | 96.00 | 8 | 40.00 | 2 |
| 17 | ಕಲ್ಬುರ್ಗಿ | 36.00 | 3 | 0 | 0 |
| 18 | ಕೊಪ್ಪಳ | 36.00 | 3 | 0 | 0 |
| 19 | ಕೊಡಗು | 120.00 | 10 | 40.00 | 2 |
| 20 | ಕೋಲಾರ | 180.00 | 15 | 100.00 | 5 |
| 21 | ಮಂಡ್ಯ | 240.00 | 20 | 200.00 | 10 |
| 22 | ಮೈಸೂರು | 336.00 | 28 | 300.00 | 15 |
| 23 | ರಾಮನಗರ | 360.00 | 30 | 320.00 | 16 |
| 24 | ರಾಯಚೂರು | 48.00 | 4 | 0 | 0 |
| 25 | ಶಿವಮೊಗ್ಗ | 504.00 | 42 | 160.00 | 8 |
| 26 | ತುಮಕೂರು | 84.00 | 7 | 0.00 | 0 |
| 27 | ಉಡುಪಿ | 240.00 | 20 | 160.00 | 8 |
| 28 | ಉತ್ತರಕನ್ನಡ | 96.00 | 8 | 120.00 | 6 |
| 29 | ವಿಜಯಪುರ | 216.00 | 18 | 100.00 | 5 |
| 30 | ವಿಜಯನಗರ | 0.00 | 0 | 0 | 0 |
| 31 | ಯಾದಗಿರಿ | 48.00 | 4 | 0 | 0 |
| **ರಾಜ್ಯದ ಒಟ್ಟು** | | **5000.00** | **417** | **3500.00** | **175** |

ಅನುಬಂಧ-3

(2)

## ಕರ್ನಾಟಕ ಸರ್ಕಾರದ ನಡವಳಿಗಳು

Comp No: 517103
16/12/20

(6)

**ವಿಷಯ:** ಅಂಗನವಾಡಿ ಕಾರ್ಯಕರ್ತೆಯರ/ಸಹಾಯಕಿಯರನ್ನು ಆಯ್ಕೆ ಮಾಡಲು ಹೊರಡಿಸಿದ ಮಾರ್ಗಸೂಚಿಗಳನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಮಮಇ 237 ಐಸಿಡಿ 2012, ದಿನಾಂಕ: 15-06-2012.
2. ಸರ್ಕಾರದ ಆದೇಶ ಸಂಖ್ಯೆ: ಮಮಇ 89 ಐಸಿಡಿ 2014, ದಿನಾಂಕ: 19-04-2014.
3. ಸರ್ಕಾರದ ಆದೇಶ ಸಂಖ್ಯೆ: ಮಮಇ 303 ಐಸಿಡಿ 2017, ದಿನಾಂಕ: 23-09-2017.
4. ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಮಮಇ 27 ಐಸಿಡಿ 2017, ದಿನಾಂಕ: 01-12-2017.
5. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಮಮಇ 303 ಐಸಿಡಿ 2017, ದಿನಾಂಕ: 19-01-2019.
6. ಸರ್ಕಾರದ ಆದೇಶ ಸಂಖ್ಯೆ: ಮಮಇ 308 ಐಸಿಡಿ 2018, ದಿನಾಂಕ: 02-02-2019.
7. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಮಮಇ 303 ಐಸಿಡಿ 2017, ದಿನಾಂಕ: 15-06-2020.
8. ಸರ್ಕಾರದ ಆದೇಶ ಸಂಖ್ಯೆ: ಮಮಇ 154 ಐಸಿಡಿ 2020, ದಿನಾಂಕ: 31-12-2020.
9. ಸರ್ಕಾರದ ಆದೇಶ ತಿದ್ದುಪಡಿ ಆದೇಶ ಸಂಖ್ಯೆ: ಮಮಇ 152 ಐಸಿಡಿ 2021, ದಿನಾಂಕ: 01-06-2021.
10. ಸರ್ಕಾರದ ಆದೇಶ ಸಂಖ್ಯೆ: ಮಮಇ 154 ಐಸಿಡಿ 2020, ದಿನಾಂಕ: 07-02-2022.
11. ಸರ್ಕಾರದ ಆದೇಶ ಸಂಖ್ಯೆ: ಮಮಇ 190 ಐಸಿಡಿ 2021, ದಿನಾಂಕ: 05-03-2022.
12. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಮಮಇ 154 ಐಸಿಡಿ 2020, ದಿನಾಂಕ: 26-05-2022.
13. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಮಮಇ 154 ಐಸಿಡಿ 2020, ದಿನಾಂಕ: 26-05-2022.
14. ಸರ್ಕಾರದ ಆದೇಶ ಸಂಖ್ಯೆ: ಮಮಇ 154 ಐಸಿಡಿ 2020, ದಿನಾಂಕ: 26-05-2022.
15. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕ ಕಡತ ಸಂಖ್ಯೆ:WCD/ICDS/ANG1/5/2022-DD ICDS-WOMEN AND CHILD DEVELOPMENT ದಿನಾಂಕ:27-10-2022.

Arh 7990 17/12/22

07 DEC 2022
ICDS

*****

**ಪ್ರಸ್ತಾವನೆ:**

ರಾಜ್ಯದಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆಯರ/ ಸಹಾಯಕಿಯರನ್ನು ಆಯ್ಕೆ ಮಾಡಲು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ:15-06-2012ರ ಆದೇಶದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು ಹಾಗೂ ಸದರಿ ಮಾರ್ಗಸೂಚಿಗಳನ್ನು ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ: 19-04-2014ರ ಆದೇಶದಲ್ಲಿ ಪರಿಷ್ಕರಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ರಾಜ್ಯದಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆಯರ/ಸಹಾಯಕಿಯರ ಆಯ್ಕೆಯನ್ನು ಆನ್‌ಲೈನ್ ಮುಖಾಂತರ ಮಾಡಲು ಹಾಗೂ ತಿದ್ದುಪಡಿಗಳನ್ನು ಅಳವಡಿಸಿಕೊಂಡು ದಿನಾಂಕ: 19-04-2014ರ ಆದೇಶದಲ್ಲಿನ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (15)ರ ಏಕ ಕಡತದಲ್ಲಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಮಾನ್ಯ ಇಲಾಖಾ ಸಚಿವರು ರಾಜ್ಯದಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರನ್ನು ಆಯ್ಕೆ ಮಾಡಲು ದಿನಾಂಕ: 23/09/2017 ರ ಮಾರ್ಗಸೂಚಿಗಳನ್ನು ಮತ್ತು ಅರ್ಹತಾ ಮಾನದಂಡಗಳನ್ನು ಪರಿಷ್ಕರಿಸಲು ಕ್ರಮ ಕೈಗೊಳ್ಳಲು ಸೂಚಿಸಿರುವ ಹಿನ್ನೆಲೆಯಲ್ಲಿ, ಅಂಗನವಾಡಿ ಕಾರ್ಯಕರ್ತೆಯರ /ಸಹಾಯಕಿಯರನ್ನು ಆಯ್ಕೆ ಮಾಡಲು ಹೊರಡಿಸಲಾದ ಕ್ರಮ ಸಂಖ್ಯೆ (4) ರಿಂದ (14)ರಲ್ಲಿ ಓದಲಾದ ಆದೇಶಗಳಲ್ಲಿ ಕೆಲವು ಸೇರ್ಪಡೆ ಮತ್ತು ತಿದ್ದುಪಡಿಗಳನ್ನು ಮಾಡಿರುವುದರಿಂದ ಅವುಗಳನ್ನು ಅಳವಡಿಸಿಕೊಂಡು ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ನೇಮಕಾತಿಯನ್ನು ಆನ್‌ಲೈನ್ ಮುಖಾಂತರ ಮಾಡಲು ಅನುಕೂಲವಾಗುವಂತೆ ಮಾರ್ಗಸೂಚಿಗಳನ್ನು ಪರಿಷ್ಕರಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 154 ಐಸಿಡಿ 2020, ಬೆಂಗಳೂರು,**
**ದಿನಾಂಕ: 03-12-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಯನ್ನು ಆನ್‌ಲೈನ್ ಮುಖಾಂತರ ನಡೆಸಲು ಈ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ದಿನಾಂಕ: 23-09-2017 ಆದೇಶದಲ್ಲಿನ ಮಾರ್ಗಸೂಚಿಗಳನ್ನು ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಲ್ಲಿರುವಂತೆ ಪರಿಷ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

N.S. Khatavkar
02/12/2022
**(ನಿರ್ಮಲಾ ಎಸ್. ಖಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗು ವಿಕಲಚೇನತರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ:5398, ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಆಬಿವೃದ್ಧಿ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು .
4. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿಲ್ಲಾ ಪಂಚಾಯತ್.
5. ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಹಣಾಧಿಕಾರಿಗಳು.
6. ಎಲ್ಲಾ ಆಯ್ಕೆ ಸಮಿತಿಯ ಸದಸ್ಯರು.
7. ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು ಮತ್ತು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
8. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು
(ಕ್ರ.ಸಂ. 3-7 ನಿರ್ದೇಶನಾಲಯದ ಮುಖಾಂತರ)

**ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರನ್ನು ಆಯ್ಕೆ ಮಾಡಲು ಹೊರಡಿಸಿದ ಮಾರ್ಗಸೂಚಿಗಳನ್ನು ಪರಿಷ್ಕರಿಸುವ ಕುರಿತು.**

**ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಯ ಮಾನದಂಡಗಳು**

I. **ಅರ್ಹತೆ:** ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

II. **ವಯೋಮಿತಿ:**

ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಲು 19-35 ವರ್ಷ ವಯೋಮಿತಿಯೊಳಗಿನ ಹೆಣ್ಣು ಮಕ್ಕಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತರು ಅರ್ಜಿ ಸಲ್ಲಿಸಬಹುದು ಹಾಗೂ ವಿಕಲಚೇತನರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

III. **ಸ್ಥಳೀಯತೆ:**

1. ಗ್ರಾಮಾಂತರ ಪ್ರದೇಶದ ಅಂಗನವಾಡಿ ಕೇಂದ್ರುವಾದಲ್ಲಿ ಆಯಾ ಕಂದಾಯ ಗ್ರಾಮದಲ್ಲಿ ವಾಸ್ತವ್ಯ ಹೊಂದಿರಬೇಕು. ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಆಯ್ಕೆಗೆ ಸ್ಥಳೀಯ ಮಜಿರೆ, ತಾಂಡಾ ಹಾಗೂ ಹಾಡಿಗೆ ಸೇರಿದವರಾಗಿದ್ದರೆ ಸಂಬಂಧಿಸಿದ ವಾಸ್ತವ್ಯ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆಯುವುದು.
2. ನಗರ ಪ್ರದೇಶದ ಅಂಗನವಾಡಿ ಕೇಂದ್ರುವಾದಲ್ಲಿ ಆಯಾ ಕಂದಾಯ ವಾರ್ಡ್‌ನಲ್ಲಿ ವಾಸ್ತವ್ಯ ಹೊಂದಿರಬೇಕು ಹಾಗೂ ವಾಸ್ತವ್ಯ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು. [ಚುನಾವಣಾ ವಾರ್ಡ್‌ಗಳನ್ನು ಪರಿಗಣಿಸುವಂತಿಲ್ಲ]
3. ತಹಶೀಲ್ದಾರ್ / ಉಪ ತಹಶೀಲ್ದಾರ್‌ರವರ ಮೂರು ವರ್ಷದ ವಾಸ್ತವ್ಯ ದೃಢೀಕರಣದೊಂದಿಗೆ ಸ್ಥಳೀಯರು ಎಂಬುದನ್ನು ದೃಢೀಕರಿಸಲು ಪೂರಕ ದಾಖಲೆಗಳಾಗಿ ಆಧಾರ ಕಾರ್ಡ್, ರೇಷನ್ ಕಾರ್ಡ್ ಮತದಾರರ ಗುರುತಿನ ಚೀಟಿಗಳನ್ನು ಪಡೆಯುವುದು. ಮಜಿರೆ, ತಾಂಡಾ ಹಾಗೂ ಹಾಡಿಗೆ ಸೇರಿದವರಾಗಿದ್ದರೆ ಸಂಬಂಧಿಸಿದ ವಾಸ್ತವ್ಯ ಪ್ರಮಾಣ ಪತ್ರ ಪಡೆಯುವುದು.

IV. **ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ವಿದ್ಯಾರ್ಹತೆ:-**

1. ಕನಿಷ್ಟ P.U.C. ತೇರ್ಗಡೆ ಹೊಂದಿರಬೇಕು. S.S.L.C.ಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಓದಿರಬೇಕು.
2. ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿ ಸಂದರ್ಭದಲ್ಲಿ "ಸರ್ಕಾರದ ಅಂಗೀಕೃತ ಸಂಸ್ಥೆಗಳಿಂದ D.S.E.R.T.ಯಿಂದ ECCE ಡಿಪ್ಲೊಮಾ ಕೋರ್ಸ್, JOC ಕೋರ್ಸ್, N.T.T. ಕೋರ್ಸ್‌ಗಳನ್ನು ಹಾಗೂ ಅಂಗನವಾಡಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಡಿಪ್ಲೊಮಾ ನ್ಯೂಟ್ರಿಷಿಯನ್, ಹೋಂ ಸೈನ್ಸ್ ಸರ್ಟಿಫಿಕೇಟ್ ಕೋರ್ಸ್, ಒಂದು ವರ್ಷದ ನರ್ಸರಿ ಅಥವಾ ಪೂರ್ವ ಪ್ರಾಥಮಿಕ ತರಬೇತಿ ಪಡೆದು ಪ್ರಮಾಣ ಪತ್ರ ಹೊಂದಿದವರಿಗೆ ಮೊದಲ ಆದ್ಯತೆ ನೀಡುವುದು ಹಾಗೂ ಸದರಿಯವರಿಗೆ ಬೋನಸ್ +5 ಅಂಕಗಳನ್ನು ನೀಡುವುದು.

V. **ಅಂಗನವಾಡಿ ಸಹಾಯಕಿ ವಿದ್ಯಾರ್ಹತೆ:-** ಹುದ್ದೆಗೆ ಕನಿಷ್ಟ ವಿದ್ಯಾರ್ಹತೆ SSLC ಅಥವಾ ತತ್ಸಮಾನ ತರಗತಿಯಲ್ಲಿ ಉತ್ತೀರ್ಣವಾಗಿರಬೇಕು.

**ಅ)** ಕರ್ನಾಟಕ ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಮುಕ್ತ ಶಾಲೆ/ಮುಕ್ತ ವಿದ್ಯಾಲಯಗಳಲ್ಲಿ S.S.L.C. ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಪ್ರಥಮ/ದ್ವಿತೀಯ ಭಾಷೆಯಾಗಿ ಕನ್ನಡ ಹಾಗೂ ಸಾಮಾನ್ಯ ಗಣಿತ ಮತ್ತು ಸಮಾಜ ಶಾಸ್ತ್ರ/ಸಮಾಜ ವಿಜ್ಞಾನ ವಿಷಯಗಳನ್ನು ಕಡ್ಡಾಯವಾಗಿ ವ್ಯಾಸಂಗ ಮಾಡಿದ್ದು ಪ್ರಮಾಣ ಪತ್ರ/ಅಂಕಪಟ್ಟಿಯು ಗರಿಷ್ಟ 625 ಕನಿಷ್ಟ 219 ಅಂಕಗಳನ್ನು ಹೊಂದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಪರಿಗಣಿಸತಕ್ಕದ್ದು.

**ಆ)** ಬೇರೆ ರಾಜ್ಯಗಳಲ್ಲಿ ವ್ಯಾಸಂಗ ಮಾಡಿದ್ದು, ಕನ್ನಡವನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದರೂ SSLC ಪರೀಕ್ಷೆಗೆ ಆ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಟ ಹಾಗೂ ಕನಿಷ್ಟ ಅಂಕಗಳು ಹಾಗೂ ಕರ್ನಾಟಕ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಟ ಹಾಗೂ ಕನಿಷ್ಟ ಅಂಕದಲ್ಲಿ ವ್ಯತ್ಯಾಸವಿದ್ದಲ್ಲಿ ಕರ್ನಾಟಕದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸತಕ್ಕದ್ದು.

**ಇ)** ಅಂಗನವಾಡಿ ಸಹಾಯಕಿಯರು ಯಾವುದೇ ಭಾಷಾ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದರೂ ಹಾಗೂ ಯಾವುದೇ ರಾಜ್ಯದಲ್ಲಿ ವ್ಯಾಸಂಗ ಮಾಡಿದ್ದರೂ ಸಹಾ ಅವರು ಕನ್ನಡ ಭಾಷೆಯನ್ನು ಪ್ರಥಮ /ದ್ವಿತೀಯ ಭಾಷೆಯಾಗಿ ವ್ಯಾಸಂಗ ಮಾಡಿರಬೇಕು. ಹಾಗೂ ಮಾತೃಭಾಷೆ ಕನ್ನಡವಲ್ಲದೇ ಇರುವ ಅಭ್ಯರ್ಥಿಗಳಿಗೆ ಆಯ್ಕೆ ಸಮಿತಿಯು ಆಯ್ಕೆ ಸಮಯದಲ್ಲಿ ಸಂದರ್ಶನ ಏರ್ಪಡಿಸಿ ಹಾಗೂ ಅವಶ್ಯವಿದ್ದಲ್ಲಿ ಕನ್ನಡ ಭಾಷೆಯ ಜ್ಞಾನದ ಕುರಿತಂತೆ ಓದಿಸಿ, ಬರೆಸಿ ಅವರ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಿ ಅವರನ್ನು ಆಯ್ಕೆ ಮಾಡುವ ಬಗ್ಗೆ ಸಮಿತಿಯವರು ನಿರ್ಧರಿಸುವುದು.

VI. **ಜನಸಂಖ್ಯಾ ಆಧಾರದ ಮೇಲೆ ಮೀಸಲಾತಿ :-**

ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗೆ ಶೇ. 25 ರಷ್ಟು ಅಲ್ಪಸಂಖ್ಯಾತ ಸಮುದಾಯದ ಜನಸಂಖ್ಯೆ ಇರುವ ಪ್ರದೇಶದ ಅಂಗನವಾಡಿ ಕೇಂದ್ರಗಳಲ್ಲಿ ಕನ್ನಡ ಭಾಷೆಯೊಂದಿಗೆ ಆಯಾ ಅಲ್ಪಸಂಖ್ಯಾತ ಸಮುದಾಯದ ಭಾಷೆ ಬಲ್ಲವರನ್ನು ಕಾರ್ಯಕರ್ತೆ / ಸಹಾಯಕಿಯ ಹುದ್ದೆಗೆ ಆಯ್ಕೆ ಮಾಡುವುದು. ಅಂಗನವಾಡಿ ಕಾರ್ಯಕರ್ತೆ / ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದವರಲ್ಲಿ ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕಗಳಿಸಿದ್ದಲ್ಲಿ ವಯೋಹಿರಿತನವನ್ನು ಪರಿಗಣಿಸಬೇಕು. ವಯಸ್ಸು ಸಮಾನವಾಗಿದ್ದಲ್ಲಿ ವಿಧವೆಯರನ್ನು ಪರಿಗಣಿಸಬೇಕು.

VII) **ಅಂಗನವಾಡಿ ಕೇಂದ್ರಗಳ ವ್ಯಾಪ್ತಿ ಗುರುತಿಸುವಿಕೆ:**

1. ಒಂದು ಗ್ರಾಮದಲ್ಲಿ ಈಗಾಗಲೇ ಅಂಗನವಾಡಿ ಕೇಂದ್ರವಿದ್ದು ಪುನ: ಬೇಡಿಕೆಗೆ ಅನುಸಾರವಾಗಿ ಹೊಸ ಕೇಂದ್ರವನ್ನು ಪ್ರಾರಂಭಿಸುತ್ತಿದ್ದಲ್ಲಿ ಹೊಸ ಕೇಂದ್ರ ಪ್ರಾರಂಭಿಸುವ ಪ್ರದೇಶದ (ವ್ಯಾಪ್ತಿಯ) ಜನಸಂಖ್ಯೆಯಲ್ಲಿ ಶೇ. 40ಕ್ಕಿಂತ ಹೆಚ್ಚು ಜನಸಂಖ್ಯೆ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದವರಿದ್ದಲ್ಲಿ ಆ ಅಂಗನವಾಡಿ ಕೇಂದ್ರಕ್ಕೆ ಸದರಿ ವರ್ಗದವರಿಗೆ ಕಾರ್ಯಕರ್ತೆ/ಸಹಾಯಕಿ ಹುದ್ದೆಯನ್ನು ನಿಗದಿಪಡಿಸಿ ಪ್ರಕಟಣೆ ಹೊರಡಿಸಿ ಸದರಿ ಗ್ರಾಮ/ನಗರ ಪ್ರದೇಶದಲ್ಲಿ ಕಂದಾಯ ವಾರ್ಡ್‌ನಿಂದ ಅರ್ಜಿಗಳನ್ನು ಆಹ್ವಾನಿಸಿ ಆ ವರ್ಗದವರನ್ನೇ ಆಯ್ಕೆ ಮಾಡುವುದು.

2. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ನಿಗದಿಪಡಿಸಿದ ಅಂಗನವಾಡಿ ಕೇಂದ್ರಗಳಲ್ಲಿ ನಿಗದಿತ ವರ್ಗದವರಿಂದ ಅರ್ಜಿಗಳು ಬಾರದಿದ್ದಲ್ಲಿ ಮರು ಪ್ರಕಟಣೆಯನ್ನು 7 ದಿನಗಳೊಳಗೆ ಹೊರಡಿಸಿ ಪುನಃ ಅರ್ಜಿಗಳನ್ನು ಆಹ್ವಾನಿಸಬೇಕು. ಆಗಲೂ ನಿಗದಿತ ವರ್ಗದವರಿಂದ ಅರ್ಜಿಗಳು ಬಾರದೆ ಹೋದಲ್ಲಿ ಪುನಃ 10 ದಿನಗಳೊಳಗೆ ಪ್ರಕಟಣೆ ಹೊರಡಿಸಿ ಸಾಮಾನ್ಯ ವರ್ಗದವರಿಂದ ಅರ್ಜಿ ಆಹ್ವಾನಿಸಿ ಆಯ್ಕೆ ಮಾಡುವುದು.

3. ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಆಯ್ಕೆಗೆ ಸಂಬಂಧಿಸಿದ ಅಂಗನವಾಡಿ ಕೇಂದ್ರದ ಗ್ರಾಮಾಂತರ ಪ್ರದೇಶದ ಕಂದಾಯ ಗ್ರಾಮ ಹಾಗೂ ನಗರ ಪ್ರದೇಶದ ಕಂದಾಯ ವಾರ್ಡ್‌ಗಳನ್ನು ಪರಿಗಣಿಸಬೇಕು.

4. ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಆಯ್ಕೆಗಾಗಿ ಎರಡನೇ ಬಾರಿಗೆ ಯಾವುದೇ ಮರು ಪ್ರಕಟಣೆ ಹೊರಡಿಸುವ ಮುನ್ನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸ್ವತಃ ಗ್ರಾಮ/ ನಗರ ಪ್ರದೇಶಗಳಿಗೆ ಭೇಟಿ ನೀಡಿ ಆ ವರ್ಗದ / ಗ್ರಾಮದ/ ನಗರ ಪ್ರದೇಶಗಳಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲವೆಂಬ ಬಗ್ಗೆ ಸ್ಥಳ ಪರಿಶೀಲನಾ ವರದಿ ಪಡೆದುಕೊಂಡಿರಬೇಕು.

5. ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಆಯ್ಕೆಗಾಗಿ ಪ್ರಕಟಣೆಯನ್ನು ಸ್ಪಷ್ಟ / ನಿಖರವಾಗಿ ಹೊರಡಿಸತಕ್ಕದ್ದು. ಹುದ್ದೆ ಖಾಲಿಯಿರುವ ಸ್ಥಳ, ಆ ಹುದ್ದೆ ಜನಸಂಖ್ಯೆ ಆಧಾರದಲ್ಲಿ ಯಾವ ವರ್ಗಕ್ಕೆ ನಿಗದಿಪಡಿಸಲಾಗಿದೆ ಎಂಬ ಬಗ್ಗೆ ತಿಳಿಸಿ ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸತಕ್ಕದ್ದು. ಪ್ರಕಟಣೆಯನ್ನು ಗ್ರಾಮದ ಕೃಷಿ ಸಂಪರ್ಕ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಸರ್ಕಾರಿ ಶಾಲೆಗಳು, ಗ್ರಾಮ ಲೆಕ್ಕಿಗರ ಕಚೇರಿ, ಅಂಗನವಾಡಿ ಕಟ್ಟಡ , ಗ್ರಾಮ ಪಂಚಾಯತ್ ಕಚೇರಿ ಕಟ್ಟಡ ಹಾಗೂ ಇನ್ನಿತರ ಸಾರ್ವಜನಿಕ ಸ್ಥಳಗಳಲ್ಲಿ ಸೂಚನಾ ಫಲಕದ ಮೇಲೆ ಪ್ರದರ್ಶಿಸತಕ್ಕದ್ದು. ಪ್ರಕಟಣೆ ಹೊರಡಿಸಿದ ದಿನಾಂಕದಿಂದ 25 ದಿನಗಳೊಳಗೆ ಅರ್ಜಿ ಸಲ್ಲಿಸುವ ಕಾಲಾವಧಿಯನ್ನು ನಿಗದಿಪಡಿಸಿರತಕ್ಕದ್ದು. ಹಾಗೂ ಪ್ರಕಟಣೆಯ ಪ್ರತಿಯನ್ನು ಆಯ್ಕೆ ಸಮಿತಿಯ ಎಲ್ಲಾ ಸದಸ್ಯರಿಗೂ ಕಳುಹಿಸತಕ್ಕದ್ದು.

6. ಅಂಗನವಾಡಿ ಕಾರ್ಯಕರ್ತೆ ಹುದ್ದೆ ಖಾಲಿಯಾದ/ಹೊಸ ಕೇಂದ್ರಕ್ಕೆ ಅರ್ಹ ಮಿನಿ ಕಾರ್ಯಕರ್ತೆ/ ಸಹಾಯಕಿಯರಿಂದ ಕಾರ್ಯಕರ್ತೆ ಹುದ್ದೆಗೆ ಪದೋನ್ನತಿ ಕೋರಿ ಅರ್ಜಿ ಸ್ವೀಕೃತವಾದಲ್ಲಿ ಮಿನಿ ಕಾರ್ಯಕರ್ತೆಗೆ ಮೊದಲನೇ ಆದ್ಯತೆ, ಸಹಾಯಕಿಯರಿಗೆ ಎರಡನೇ ಆದ್ಯತೆ, ಸ್ಥಾನಪಲ್ಲಟಕ್ಕೆ ಮೂರನೇ ಆದ್ಯತೆ, ನೀಡಿ ಅವರನ್ನೇ ಆಯ್ಕೆ ಮಾಡತಕ್ಕದ್ದು. ಅಂತಹ ಯಾವುದೇ ಅರ್ಜಿಗಳು ಸ್ವೀಕೃತವಾಗಿಲ್ಲದಿದ್ದಲ್ಲಿ ಸ್ಥಾನಪಲ್ಲಟ/ವರ್ಗಾವಣೆಗೆ ಆದ್ಯತೆ ನೀಡುವುದು. ಸದರಿ ಯಾವುದೇ ಪ್ರಕರಣಗಳು ಇಲ್ಲದಿದ್ದಲ್ಲಿ ಹೊಸದಾಗಿ ಆಯ್ಕೆ ಮಾಡುವ ಪ್ರಕ್ರಿಯೆಯನ್ನು ಪ್ರಾರಂಭಿಸಿ ಗರಿಷ್ಟ 3 ತಿಂಗಳೊಳಗೆ ಮುಗಿಸತಕ್ಕದ್ದು.

7. ಸ್ಥಳೀಯ ಚುನಾಯಿತ ಪ್ರತಿನಿಧಿಗಳು ಅಂಗನವಾಡಿ ಕಾರ್ಯಕರ್ತೆ /ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಿದ್ದು ಆಯ್ಕೆಯಾಗುವ ಸಂಭವವಿದ್ದಲ್ಲಿ ಆಯ್ಕೆ ಪಟ್ಟಿ ಪ್ರಕಟಿಸುವ ಮುನ್ನ ಚುನಾಯಿತ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸಿ ರಾಜೀನಾಮೆ ಅಂಗೀಕೃತ ಪತ್ರ ನೀಡಬೇಕಾಗಿರುವುದು ಕಡ್ಡಾಯ. ಅಂದರೆ ಯಾವುದಾದರೂ ಒಂದು ಸ್ಥಾನದಲ್ಲಿ ಮಾತ್ರ ಕೆಲಸ ನಿರ್ವಹಿಸಲು ಅವಕಾಶವಿದೆ.

8. ಒಂದು ಗ್ರಾಮದಲ್ಲಿ ಒಂದು ಅಂಗನವಾಡಿ ಕೇಂದ್ರವಿದ್ದಾಗಲೂ ಗ್ರಾಮ/ ವಾರ್ಡ್‌ನಿಂದ ಮಾತ್ರ ಅರ್ಜಿಗಳನ್ನು ಆಹ್ವಾನಿಸುವುದು. ಒಂದು ವೇಳೆ ಆ ಗ್ರಾಮ/ ವಾರ್ಡ್‌ರವರಿಂದ ಅರ್ಜಿಗಳು ಸ್ವೀಕೃತವಾಗದೇ ಇದ್ದಲ್ಲಿ 7 ದಿನಗಳೊಳಗೆ ಮರುಪ್ರಕಟಣೆ ಹೊರಡಿಸಬೇಕು. ಎರಡನೇ ಬಾರಿಯೂ ಸ್ಥಳೀಯರಿಂದ ಅರ್ಜಿಗಳು ಬಾರದಿದ್ದಲ್ಲಿ ಪುನಃ 10 ದಿನಗಳೊಳಗಾಗಿ ಪ್ರಕಟಣೆ ಹೊರಡಿಸಿ ಅತ್ಯಂತ ಸಮೀಪದ ಗ್ರಾಮ / ವಾರ್ಡ್‌ರವರಿಂದ 3 ಕಿ.ಮೀ. ವ್ಯಾಪ್ತಿಯೊಳಗಿನ ಗ್ರಾಮದವರಿಂದ ಅರ್ಜಿ ಆಹ್ವಾನಿಸಿ ಆಯ್ಕೆ ಪರಿಗಣಿಸುವುದು.

VIII. ಆಯ್ಕೆ ಆದ್ಯತೆ:-

1. **ಆಸಿಡ್ ದಾಳಿಗೆ ತುತ್ತಾದ ಮಹಿಳೆಯರ ಆಯ್ಕೆ:-**

ಆಸಿಡ್ ದಾಳಿಗೆ ತುತ್ತಾದ ಮಹಿಳೆಯರು ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಿದ್ದಲ್ಲಿ ಅರ್ಹ ಅಭ್ಯರ್ಥಿಗೆ +5 ಬೋನಸ್ ಅಂಕಗಳನ್ನು ನೀಡುವುದು.

2. **ಇಲಾಖೆಯ ಸಂಸ್ಥೆಗಳ ನಿವಾಸಿಗಳ ಆಯ್ಕೆ :-**

ಇಲಾಖೆಯ ಸುಧಾರಣಾ ಸಂಸ್ಥೆ / ರಾಜ್ಯ ಮಹಿಳಾ ನಿಲಯಗಳ ನಿವಾಸಿಗಳು ಕನಿಷ್ಟ 3 ವರ್ಷ ಸಂಸ್ಥೆಯಲ್ಲಿರಬೇಕು ಹಾಗೂ ಈ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ನಿವಾಸಿ ಪ್ರಮಾಣ ಪತ್ರ ನೇಮಕಾತಿ ಪ್ರಕ್ರಿಯೆಯಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ +10 ಬೋನಸ್ ಅಂಕಗಳನ್ನು ನೀಡುವುದು. ವಾಸಸ್ಥಳ ದೃಢೀಕರಣವನ್ನು ಸಲ್ಲಿಸಿರುವ ಆ ಜಿಲ್ಲೆಯಲ್ಲಿ ಎಲ್ಲಿಯಾದರೂ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

3. **ವಿಧವೆಯರ ಆಯ್ಕೆ:-**

ನೇಮಕಾತಿ ಪ್ರಕ್ರಿಯೆಯಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ +5 ಬೋನಸ್ ಅಂಕಗಳನ್ನು ನೀಡುವುದು. ಮರಣ ಪ್ರಮಾಣಪತ್ರ, ವಿಧವಾ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಲಗತ್ತಿಸುವುದು.

4. **ಅಂಗವಿಕಲರ ಆಯ್ಕೆ:-**

- ದೈಹಿಕ ಅಂಗವಿಕಲತೆಯ ಪ್ರಮಾಣವನ್ನು ಶೇ.40ಕ್ಕಿಂತ ಹೆಚ್ಚಿರದ ಹಾಗೆ ನಿಗದಿಪಡಿಸುವುದು. ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ +5 ಬೋನಸ್ ಅಂಕಗಳನ್ನು ನೀಡುವುದು. ಅಂಗವಿಕಲರು ಪ್ರಸ್ತುತ ತಾವು ಎಲ್ಲಿ ವಾಸವಾಗಿರುವುದಾಗಿ ವಾಸಸ್ಥಳ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೊ ಆ ಸ್ಥಳವನ್ನೇ ಅವರ ವಾಸಸ್ಥಳವೆಂದು ಪರಿಗಣಿಸತಕ್ಕದ್ದು.

- ಅಂಗವಿಕಲ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಅಂಗವಿಕಲತೆಯ ಪ್ರಮಾಣದ ಬಗ್ಗೆ ಸಂಶಯ ಉಂಟಾದಲ್ಲಿ ಆ ಅಭ್ಯರ್ಥಿಯನ್ನು ಆಯ್ಕೆ ಸಮಿತಿಯ ಮುಂದೆ ಖುದ್ದು ಹಾಜರಾಗಲು ಸೂಚಿಸಿ ಸದರಿ ಹುದ್ದೆ ನಿರ್ವಹಿಸಲು ಸಮರ್ಥರಿರುವ ಬಗ್ಗೆ ಸಮಿತಿಯೇ ಪರಿಶೀಲಿಸಿ ನಿರ್ಧರಿಸತಕ್ಕದ್ದು.

IX **ಬೋನಸ್ ಅಂಕಗಳು: (ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ)**

ಅಂಗನವಾಡಿ ಕಾರ್ಯಕರ್ತೆ / ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದವರಲ್ಲಿ ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕ ಗಳಿಸಿದ್ದಲ್ಲಿ ವಯೋಹಿರಿತನವನ್ನು ಪರಿಗಣಿಸಬೇಕು. ವಯಸ್ಸು ಸಮಾನವಾಗಿದ್ದಲ್ಲಿ ವಿಧವೆ/ ವಿಚ್ಛೇದಿತೆಯರನ್ನು ಪರಿಗಣಿಸಬೇಕು. ಮಾಜಿ ದೇವದಾಸಿಯ ಮಗಳು, ಯೋಜನಾ ನಿರಾಶ್ರಿತರು, ವಿಚ್ಛೇದಿತ ಮಹಿಳೆಯರು ಇವರುಗಳಿಗೆ +5 ಬೋನಸ್ ಅಂಕಗಳನ್ನು ನಿಗದಿಪಡಿಸುವುದು. (ಅಧಿಕೃತ ಪ್ರಮಾಣಪತ್ರ ನೀಡುವ ಷರತ್ತಿಗೊಳಪಟ್ಟು)

X **ಆನ್ ಲೈನ್ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:-**

1. ಅರ್ಜಿ ನಿಗದಿತ ನಮೂನೆಯಲ್ಲಿ (ಆನ್ ಲೈನ್)
2. ಜನನ ಪ್ರಮಾಣ ಪತ್ರ/ಜನ್ಮ ದಿನಾಂಕ ಇರುವ S.S.L.C.ಅಂಕಪಟ್ಟಿ
3. ನಿಗದಿತ ವಿದ್ಯಾರ್ಹತೆಯ ಅಂಕಪಟ್ಟಿ
4. ತಹಶೀಲ್ದಾರರು/ಉಪ ತಹಶೀಲ್ದಾರರಿಂದ ಪಡೆದ ಮೂರು (3) ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ

5. ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ
6. ಪತಿಯ ಮರಣ ಪ್ರಮಾಣ ಪತ್ರ ಹಾಗೂ ವಿಧವಾ ಪ್ರಮಾಣ ಪತ್ರ (ವಿಧವಾ ವೇತನದ ದೃಢಿಕರಣವನ್ನು ಪರಿಗಣಿಸುವಂತಿಲ್ಲ)
7. ಅಂಗವಿಕಲತೆ ಪ್ರಮಾಣಪತ್ರ (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವಂತಿಲ್ಲ)
8. ವಿಚ್ಛೇದನ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)
9. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ
10. ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿಗಳು ಕನಿಷ್ಟ 3 ವರ್ಷ ಸಂಸ್ಥೆಯಲ್ಲಿರಬೇಕು. ಹಾಗೂ ಈ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ನಿವಾಸಿ ಪ್ರಮಾಣ ಪತ್ರ
11. ಯೋಜನಾ ನಿರಾಶ್ರಿತರ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ
12. ಆಧಾರ್ ಕಾರ್ಡ್/ಮತದಾರರ ಗುರುತಿನ ಚೀಟಿ/ರೇಷನ್ ಕಾರ್ಡ್/ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ
13. ಎಲ್ಲಾ ದಾಖಲಾತಿಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಣ ಮಾಡಿಸಿ ಸಲ್ಲಿಸುವುದು.

**XI . ಆಯ್ಕೆ ವಿಧಾನ:-**

1. ಅರ್ಜಿ ಸಲ್ಲಿಸಲು ಕನಿಷ್ಟ ಒಂದು ತಿಂಗಳು ನಿಗದಿಪಡಿಸಬೇಕು.
2. ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದ ನಂತರ ಮುಂದಿನ 7 ಕೆಲಸದ ದಿನಗಳೊಳಗೆ ಸಮಿತಿ ಸಭೆ ಸೇರಬೇಕು.
3. ಆಯ್ಕೆ ಸಮಿತಿಯ ಎಲ್ಲಾ ಸದಸ್ಯರು ಹಾಜರಾಗಲು ಸಾಧ್ಯವಾಗದಂತಹ ಅನಿವಾರ್ಯ ಕಾರಣಗಳಿದ್ದಲ್ಲಿ ಕನಿಷ್ಟ 2/3ರಷ್ಟು ಸದಸ್ಯರು ಕಡ್ಡಾಯವಾಗಿ ಹಾಜರಿರಬೇಕು.
4. ಆನ್‌ಲೈನ್ ನಲ್ಲಿ ಸಲ್ಲಿಸಿದ ಎಲ್ಲಾ ಅರ್ಜಿಗಳನ್ನು ಅಂದೇ ಪರಿಶೀಲಿಸುವುದು
5. ಆನ್‌ಲೈನ್ ಅರ್ಜಿಯೊಂದಿಗೆ ಯಾವುದೇ ಅಗತ್ಯ ದಾಖಲೆಯನ್ನು ಸಲ್ಲಿಸದೇ ಇದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವುದು ಮತ್ತು ಅಸ್ಪಷ್ಟ / ಅಪೂರ್ಣ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.
6. ಸ್ವೀಕೃತವಾದ ಅರ್ಜಿಗಳನ್ನು ವಿದ್ಯಾರ್ಹತೆಯಲ್ಲಿ ಪಡೆದ ಅಂಕ ಮತ್ತು ಬೋನಸ್ ಅಂಕಗಳನ್ನು ಒಳಗೊಂಡಂತೆ ಪಡೆದ ಒಟ್ಟು ಅಂಕಗಳಿಗನುಸಾರವಾಗಿ ಕ್ರೋಢೀಕೃತ ಪಟ್ಟಿಯನ್ನು ಆನ್ ಲೈನ್ ನಲ್ಲಿ ಸಿದ್ಧಪಡಿಸಿ ಅರ್ಹತೆ ಮತ್ತು ಮೆರಿಟ್‌ಗನುಸಾರವಾಗಿ ಪರಿಶೀಲಿಸಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಅಂದೇ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸುವುದು.
7. ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಲು ಒಂದು ವಾರ (7 ದಿನಗಳು) ಕಾಲಾವಕಾಶ ನೀಡುವುದು. ಹಾಗೂ ಕಾಲಾವಕಾಶ ಮುಗಿದ ಮುಂದಿನ ಕೆಲಸದ ದಿನವೇ ಸಮಿತಿಯ ಸಭೆ ಕರೆದು ಆಕ್ಷೇಪಣೆಗಳು ಸ್ವೀಕೃತವಾದಲ್ಲಿ ಅವುಗಳನ್ನು ಕ್ರೋಢೀಕರಿಸಿ ಚರ್ಚಿಸಿ ಕಾರ್ಯಕರ್ತೆ/ ಸಹಾಯಕಿಯರ ಅಂತಿಮ ಆಯ್ಕೆ ಪಟ್ಟಿಯನ್ನು ಅಂದೇ ಸೂಚನಾ ಫಲಕದಲ್ಲಿ ಪ್ರಕಟಿಸುವುದು.
8. ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಸಮಸ್ಯೆ ಕಂಡು ಬಂದಲ್ಲಿ ನೇಮಕಾತಿ ಪ್ರಾಧಿಕಾರವೇ ಚರ್ಚಿಸಿ ನಿಯಮಾನುಸಾರ ಕ್ರಮ ವಹಿಸುವುದು. ಆಯ್ಕೆ ಸಮಿತಿಯ ನಿರ್ಧಾರವೇ ಅಂತಿಮವಾಗಿರುತ್ತದೆ.
9. ಆಯ್ಕೆ ನಡವಳಿ ಪುಸ್ತಕದಲ್ಲಿ ಆಯ್ಕೆ ಸಮಿತಿಗೆ ಹಾಜರಾದ ಎಲ್ಲಾ ಸದಸ್ಯರ ಹಾಜರಾತಿ ಪಡೆಯುವುದು. ಆಯ್ಕೆ ಪ್ರಕ್ರಿಯೆ ಮುಗಿದ ನಂತರ ನಡವಳಿಗಳನ್ನು ಸವಿವರವಾಗಿ (speaking order), ಕೇಂದ್ರುವಾರು ಆಯ್ಕೆಯಾದ ಅಭ್ಯರ್ಥಿಗಳ ಹೆಸರುಗಳನ್ನು ಯಾವ ಮಾನದಂಡಗಳನ್ವಯ ಆಯ್ಕೆ ಮಾಡಲಾಗಿದೆ? ಎಂಬ ಷರಾದೊಂದಿಗೆ ನಡವಳಿಯಲ್ಲಿ ದಾಖಲಿಸಿ ಯಾವುದೇ ತಿದ್ದುಪಡಿಗಳಿದ್ದಲ್ಲಿ

ಸಕಾರಣದೊಂದಿಗೆ ದೃಢೀಕರಿಸಿ ಹಾಜರಿರುವ ಆಯ್ಕೆ ಸಮಿತಿಯ ಎಲ್ಲಾ ಸದಸ್ಯರ ಸಹಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.

10. ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು ಅಂತಿಮ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯಾಗಿ ಕಾರ್ಯ ನಿರ್ವಹಿಸಲು ನೇಮಕಾತಿ ಆದೇಶಗಳನ್ನು ಹೊರಡಿಸಬೇಕು.

11. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯ ಹುದ್ದೆಯು ಸಂಪೂರ್ಣವಾಗಿ ಗೌರವ ಸೇವೆಯಾಗಿದ್ದು, ಖಾಯಂ ಹುದ್ದೆಯಲ್ಲವೆಂದು ನೇಮಕಾತಿ ಆದೇಶದಲ್ಲಿ ತಿಳಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ವರದಿ ಮಾಡಿಕೊಳ್ಳುವ ಸಮಯದಲ್ಲಿ ಮೂಲ ದಾಖಲಾತಿಗಳು, ವೈದ್ಯಕೀಯ ಪ್ರಮಾಣ ಪತ್ರ (ಫಿಟ್‌ನೆಸ್ ಸರ್ಟಿಫಿಕೇಟ್) ಗಳನ್ನು ಹಾಜರುಪಡಿಸಿ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪರಿಶೀಲಿಸಿ ವರದಿ ಮಾಡಿಕೊಳ್ಳತಕ್ಕದ್ದು.

12. 6 ತಿಂಗಳು ಮುಂಚಿತವಾಗಿ ನಿವೃತ್ತಿಗೊಳ್ಳುವ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಪಟ್ಟಿ ಮಾಡಿ ಅವರ ಸ್ಥಾನಕ್ಕೆ ಆಯ್ಕೆ ಪ್ರಕ್ರಿಯೆಯನ್ನು ಪದೋನ್ನತಿ/ಸ್ಥಾನಪಲ್ಲಟ ನಂತರ ನೇಮಕಾತಿಯ ಮೂಲಕ ಹುದ್ದೆ ಭರ್ತಿ ಮಾಡಲು ತಯಾರಿ ಮಾಡಿಕೊಳ್ಳುವುದು. ಕೋರ್ಟ್ ಕೇಸ್ ಹೊರತು ಪಡಿಸಿ ಯಾವುದೇ ಕಾರಣಕ್ಕೂ ಗರಿಷ್ಠ 3 ತಿಂಗಳಿಗಿಂತ ಹೆಚ್ಚು ಅವಧಿಯ ವಿಳಂಬವನ್ನು ಮಾಡಬಾರದು.

13. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಸ್ತಾವನೆಯನ್ನು ಉಪ ನಿರ್ದೇಶಕರಿಗೆ ಸಲ್ಲಿಸುವುದು. ಉಪ ನಿರ್ದೇಶಕರು ಏಕಕಡತದಲ್ಲಿ ಜಿಲ್ಲಾಧಿಕಾರಿಗಳಿಂದ ಅನುಮೋದನೆ ಪಡೆದು ಆಯ್ಕೆ ಆದೇಶ ನೀಡುವುದು.

## XII ಮಿನಿ ಅಂಗನವಾಡಿ ಕಾರ್ಯಕರ್ತೆ/ ಅಂಗನವಾಡಿ ಸಹಾಯಕಿಯರನ್ನು ಕಾರ್ಯಕರ್ತೆಯರನ್ನಾಗಿ ಪದೋನ್ನತಿಗೆ ಗುರುತಿಸುವ ವಿಧಾನದ ಕುರಿತು:-

- ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳಿಗೆ ಪಿ.ಯು.ಸಿ. ಉತ್ತೀರ್ಣ ಹೊಂದಿದ ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮೊದಲ ಆದ್ಯತೆ ನೀಡುವುದು. ಅಂಗನವಾಡಿ ಸಹಾಯಕಿಯರು 5 ವರ್ಷ ಕನಿಷ್ಟ ಸೇವೆ , ಉತ್ತಮ ಸೇವಾ ದಾಖಲೆ, ಹಿರಿಯ ವಯೋಮಾನ ಹೊಂದಿದ ಸಹಾಯಕಿಯರನ್ನು ಹೆಚ್ಚಿನ ವಿದ್ಯಾರ್ಹತೆ ಹಾಗೂ ವಯಸ್ಸಿನ ಅನುಗುಣವಾಗಿ ಪದೋನ್ನತಿಗೆ ಪರಿಗಣಿಸುವುದು. ಹಾಗೂ ಅದೇ ಗ್ರಾಮ/ ನಗರ ಪ್ರದೇಶದಲ್ಲಿ ಮೂರು ಕಿ.ಮೀ. ವ್ಯಾಪ್ತಿಯಲ್ಲಿ ವಾಸವಾಗಿರುವುದು.

## XIII ಅನುಕಂಪದ ಆಧಾರದಲ್ಲಿ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಗುರುತಿಸುವ ಬಗ್ಗೆ.

1. ಸೇವೆಯಲ್ಲಿರುವಾಗಲೇ ಮರಣ ಹೊಂದಿರುವ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಮಗಳು ಅಥವಾ ಸೊಸೆಯನ್ನು ಅರ್ಹತೆಯ ಮೇಲೆ ಅವರ ತಾಯಿ/ ಅತ್ತೆಯು ನಿರ್ವಹಿಸುತ್ತಿದ್ದ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯ ಹುದ್ದೆಗೆ ಅನುಕಂಪದ ಆಧಾರದಲ್ಲಿ ಆ ಕುಟುಂಬದ ಸದಸ್ಯರಿಂದ ನಿರಾಕ್ಷೇಪಣಾ ಪತ್ರವನ್ನು ನಿಗದಿತ ಮೊತ್ತದ ಛಾಪಾ ಕಾಗದದ ಮೇಲೆ ಪಡೆದು ನೇಮಕ ಮಾಡತಕ್ಕದ್ದು.

2. ಅಭ್ಯರ್ಥಿಯ ನಿಗದಿತ ವಿದ್ಯಾರ್ಹತೆ, ವಯೋಮಿತಿ ಮತ್ತು ಸ್ಥಳೀಯರಾಗಿರಬೇಕಾಗಿರುವುದು ಕಡ್ಡಾಯ ಹಾಗೂ ಉಳಿದ ಆಯ್ಕೆ ನಿಯಮಗಳು ಅನ್ವಯಿಸುತ್ತವೆ.

## XIV. ಶಿಸ್ತು ಪ್ರಾಧಿಕಾರ:-

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಕಾರ್ಯ ನಿರ್ವಹಣೆಯಲ್ಲಿ ಯಾವುದೇ ನ್ಯೂನ್ಯತೆಗಳ ಬಗ್ಗೆ ದೂರುಗಳು ಜಿಲ್ಲಾ/ತಾಲ್ಲೂಕು ಮಟ್ಟದಲ್ಲಿ ಸ್ವೀಕೃತಗೊಂಡಲ್ಲಿ ಅವುಗಳನ್ನು ಪರಿಶೀಲಿಸಿ ಅವರ ಮೇಲೆ ಶಿಸ್ತುಕ್ರಮ ಕ್ರಮ ಕೈಗೊಳ್ಳಲು ಜಿಲ್ಲಾ ಆಯ್ಕೆ ಸಮಿತಿಗೆ ಅಧಿಕಾರವಿರುತ್ತದೆ. ಅದರಂತೆ, ರಾಜ್ಯಮಟ್ಟದ ಅಧಿಕಾರಿಗಳು ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದಾಗ ನ್ಯೂನ್ಯತೆಗಳು ಕಂಡುಬಂದಲ್ಲಿ ಅವರ ಮೇಲೆ ಶಿಸ್ತುಕ್ರಮ ಕೈಗೊಳ್ಳಲು ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ಅಧಿಕಾರವಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಆಯ್ಕೆ ಸಮಿತಿ ಹಾಗೂ ತಾಲ್ಲೂಕು ಮಟ್ಟದ ಸಮಿತಿಯನ್ನು ಈ ಕೆಳಕಂಡಂತೆ ರಚಿಸಲಾಗಿದೆ.

## XV. ಜಿಲ್ಲಾ/ತಾಲ್ಲೂಕು ಮಟ್ಟದ ಆಯ್ಕೆ ಸಮಿತಿ:-

**1.ಜಿಲ್ಲಾ ಮಟ್ಟದ ಆಯ್ಕೆ ಸಮಿತಿ:-**

**ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆ ಸಮಿತಿಯ ಸದಸ್ಯರು.**

| | | |
|---|---|---|
| 1 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ | ಉಪಾಧ್ಯಕ್ಷರು |
| 3 | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 4 | ಆಯುಕ್ತರು / ಉಪ ಆಯುಕ್ತರು ನಗರ ಸಭೆ/ ನಗರಪಾಲಿಕೆ / ಮಹಾನಗರ ಪಾಲಿಕೆ / ಬಿ.ಬಿ.ಎಂ.ಪಿ. | ಸದಸ್ಯರು |
| 5 | ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯರು |
| 6 | ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯ ಕಾರ್ಯದರ್ಶಿಗಳು |

**2.ತಾಲ್ಲೂಕು ಮಟ್ಟದ ಪರಿಶೀಲನಾ ಸಮಿತಿ:-**

**ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಅರ್ಜಿಗಳ ಪರಿಶೀಲನಾ ಸಮಿತಿ**

| | | |
|---|---|---|
| 1 | ತಹಶೀಲ್ದಾರರು | ಅಧ್ಯಕ್ಷರು |
| 2 | ಕಾರ್ಯ ನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ | ಉಪಾಧ್ಯಕ್ಷರು |
| 3 | ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 4 | ಆಯುಕ್ತರು, ಪುರಸಭೆ/ಪಟ್ಟಣ ಪಂಚಾಯತಿ | ಸದಸ್ಯರು |
| 5 | ಕ್ಷೇತ್ರ ಶಿಕ್ಷಣಾಧಿಕಾರಿಗಳು | ಸದಸ್ಯರು |
| 6 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು | ಸದಸ್ಯ ಕಾರ್ಯದರ್ಶಿಗಳು |

ತಾಲ್ಲೂಕು ಸಮಿತಿಯ ಅರ್ಜಿಗಳನ್ನು ಪರಿಶೀಲಿಸಿದ ಪಟ್ಟಿಯನ್ನು ಉಪ ನಿರ್ದೇಶಕರಿಗೆ ಸಲ್ಲಿಸುವುದು. ಉಪ ನಿರ್ದೇಶಕರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಅರ್ಜಿಗಳನ್ನು ಕ್ರೋಢೀಕರಿಸಿ ಜಿಲ್ಲಾ ಸಮಿತಿಗೆ ಸಲ್ಲಿಸಿ ನಡವಳಿ ಮಾಡುವುದು.

**ಇತರೆ ಷರತ್ತುಗಳು:-**

- ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು/ ಉಪ ನಿರ್ದೇಶಕರು ಅಭ್ಯರ್ಥಿಗಳು ಕನ್ನಡ ಭಾಷೆಯಲ್ಲಿ ಅರ್ಜಿಗಳನ್ನು ಡೌನ್ ಲೋಡ್ ಮಾಡಲು ಅವಕಾಶ ಕಲ್ಪಿಸುವುದು.
- ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಾಗ ಗ್ರಾಮ ಪಂಚಾಯತ್ ಮತ್ತು ವಾರ್ಡ್ ಮಾತ್ರ ಅಂತರ್ಜಾಲದಲ್ಲಿ ಪ್ರತಿಫಲನವಾಗುತ್ತಿದ್ದು ಗ್ರಾಮದ ಮಾಹಿತಿಯನ್ನು ಅಂತರ್ಜಾಲದ ತಂತ್ರಾಂಶದಲ್ಲಿ ಸೇರಿಸುವುದು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು/ಉಪ ನಿರ್ದೇಶಕರು ಗ್ರಾಮ/ವಾರ್ಡ್ ಮಾಹಿತಿಯನ್ನು ಅಂತರ್ಜಾಲದಲ್ಲಿ ಅಪ್ ಲೋಡ್ ಮಾಡುವುದು.
- ಸರ್ಕಾರದ ಆದೇಶ ದಿನಾಂಕ 18.08.2018ರಂತೆ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಸ್ಥಾನಪಲ್ಲಟ ಕೋರಿದಾಗ ಗೌರವ ಸೇವಾವಧಿಯಲ್ಲಿ 2 ಸ್ಥಾನಪಲ್ಲಟಕ್ಕೆ ಅವಕಾಶವಿದ್ದು, ಒಂದು ಬಾರಿ ಸ್ಥಾನಪಲ್ಲಟ ಮಾಡಿದ ನಂತರ 2ನೇ ಸ್ಥಾನಪಲ್ಲಟಕ್ಕೆ 3 ವರ್ಷಗಳ ಅಂತರವಿರಬೇಕು.

N.S.Khatawkar
03/12/2022

**(ನಿರ್ಮಲಾ ಎಸ್. ಖಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗು ವಿಕಲಚೇನತರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

03/12

ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ 154 ಐಸಿಡಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 31.01.2023.

**ತಿದ್ದುಪಡಿ ಆದೇಶ**

ಇದೇ ಸಮ ಸಂಖ್ಯೆಯ ತಿದ್ದುಪಡಿ ಆದೇಶ ದಿನಾಂಕ:30.01.2023ನ್ನು ಹಿಂಪಡೆಯಲಾಗಿದೆ.

ಮುಂದುವರೆದು ಇದೇ ಸಮ ಸಂಖ್ಯೆಯ ಆದೇಶ ದಿನಾಂಕ: 03.12.2022 ರ ಮಾರ್ಗಸೂಚಿಯ ಕ್ರ.ಸಂ. XII ರಲ್ಲಿನ ಮಿನಿ ಅಂಗನವಾಡಿ ಕಾರ್ಯಕರ್ತೆ / ಅಂಗನವಾಡಿ ಸಹಾಯಕಿಯರನ್ನು ಕಾರ್ಯಕರ್ತೆಯರನ್ನಾಗಿ ಪದೋನ್ನತಿಗೆ ಗುರುತಿಸುವ ವಿಧಾನದಲ್ಲಿ "ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳಿಗೆ ಪಿ.ಯು.ಸಿ. ಉತ್ತೀರ್ಣ ಹೊಂದಿದ ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮೊದಲ ಆದ್ಯತೆ ನೀಡುವುದು" **ಎಂಬುದರ ಬದಲಾಗಿ** " ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳಿಗೆ S.S.L.C. ಉತ್ತೀರ್ಣ ಹೊಂದಿದ ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ / ಸಹಾಯಕಿಯರಿಗೆ ಆದ್ಯತೆ ನೀಡುವುದು. ಹಾಗೂ ಒಂದೇ ಹುದ್ದೆಗೆ ಮಿನಿ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರು ಅರ್ಜಿ ಸಲ್ಲಿಸಿದಲ್ಲಿ ಅರ್ಜಿದಾರರ ವಯಸ್ಸಿನಲ್ಲಿ ಹಿರಿಯರಾದವರನ್ನು ಪರಿಗಣಿಸತಕ್ಕದ್ದು " ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಮುಂದುವರೆದು, ದಿನಾಂಕ: 03.12.2022 ರ ಆದೇಶದಲ್ಲಿನ ಮಾರ್ಗಸೂಚಿಯ ಕ್ರ.ಸಂ. XII ರಲ್ಲಿನ ಇತರೆ ಷರತ್ತುಗಳನ್ನು ಪೂರೈಸಿರಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

N.S. Khatavkar 31/01/2023
(ನಿರ್ಮಲಾ ಎಸ್. ಖಟಾವ್‌ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ:5398, ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
4. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
5. ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಹಣಾಧಿಕಾರಿಗಳು.
6. ಎಲ್ಲಾ ಆಯ್ಕೆ ಸಮಿತಿಯ ಸದಸ್ಯರು.
7. ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳು ಮತ್ತು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
8. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲ ಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು
(ಕ್ರ.ಸಂ. 3-7 ನಿರ್ದೇಶನಾಲಯದ ಮುಖಾಂತರ)

ಅನುಬಂಧ -4

## ಇಲಾಖಾ ಅನುದಾನದಡಿ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ನಡೆಯುತ್ತಿರುವ ವೃದ್ಧಾಶ್ರಮಗಳ ಮಾಹಿತಿ

| ಕ್ರ. ಸಂ | ಜಿಲ್ಲೆಯ ಹೆಸರು | ಕ್ರ. ಸಂ. | ವೃದ್ಧಾಶ್ರಮದ ಸಂಸ್ಥೆ ಹೆಸರು |
|---|---|---|---|
| 1 | ಬೆಂಗಳೂರು (ನ) | 1 | ತುಂಗಭದ್ರ ವಿದ್ಯಾ ಸಂಸ್ಥೆ (ರಿ), ನಂ.113, 2ನೇ ಕ್ರಾಸ್, 2ನೇ ಹಂತ, ಮಹಾಲಕ್ಷ್ಮೀಪುರಂ, ಬೆಂಗಳೂರು-17 |
| | | 2 | ಸಾಂತ್ವಾನ ಮಹಿಳಾ ಅಭಿವೃದ್ಧಿ ಸಂಸ್ಥೆ (ರಿ), ನಂ.53, ಗುರುಜಿ ನಿಲಯ, 4ನೇ ಮೈನ್ , 2ನೇ ಕ್ರಾಸ್, ಜೆ.ಪಿ.ನಗರ, 8 ನೇ ಹಂತ, ಆದಿತ್ಯ ನಗರ, ಬೆಂಗಳೂರು |
| | | 3 | ಚೆಶೈರ್ ಹೋಮ್ ಇಂಡಿಯಾ (ರಿ), ನಂ.408, ಇಸಿಸಿ ರೋಡ್, ವಿಮಾನ ನಿಲ್ದಾಣ ರಸ್ತೆ, ಮಣಿಪಾಲ ಆಸ್ಪತ್ರೆ ಎದುರು, ಬೆಂಗಳೂರು-17 |
| | | 4 | ಯಶಸ್ವಿನಿ ವಿದ್ಯಾಸಂಸ್ಥೆ,ಮಹಾಲಕ್ಷ್ಮೀಪುರಂ ಬೆಂಗಳೂರು |
| 2 | ಬೆಂಗಳೂರು (ಗ್ರಾ) | 5 | ಶ್ರೀವನಕಲ್ಲು ಮಲ್ಲೇಶ್ವರ ಮಠ ವೃದ್ಧಾಶ್ರಮ ಹೆಗ್ಗುಂದ ಅಂಚೆ, ಸೋಂಪುರ ಹೋಬಳಿ ನೆಲಮಂಗಲ ತಾಲ್ಲೂಕು |
| | | 6 | ಅಲ್-ಅಮನ್ ಎಜುಕೇಶನಲ್ ವೆಲ್ಫೇರ್ ಟ್ರಸ್ಟ್ & ಆಶಿಯಾನ ವೃದ್ಧಾಶ್ರಮ, ಕನ್ನಮಂಗಲಪಾಳ್ಯ ದೇವನಹಳ್ಳಿ ತಾಲ್ಲೂಕು |
| 3 | ಬೆಳಗಾವಿ | 7 | ಡಾ. ಬಿ.ಆರ್. ಅಂಬೇಡ್ಕರ್ ಹರಿಜನ ಶಿಕ್ಷಣ ಸಂಸ್ಥೆ, ಬೆಳಗಾವಿ. ಶ್ರೀ ಸಾಯಿನಾಥ ವೃದ್ಧಾಶ್ರಮ ಮುತಗಾ ತಾ/ಜಿ: ಬೆಳಗಾವಿ. |
| | | 8 | ಜೊಲ್ಲೆ ಎಜ್ಯುಕೇಶನ್ ಸೊಸೈಟಿ. ಯಕ್ಸಂಬಾ ತಾ: ಚಿಕ್ಕೋಡಿ ಹಿರಿಯ ನಾಗರಿಕರ ತಂಗುದಾನ (ವೃದ್ಧಾಶ್ರಮ) ಆಯುರ್ವೇದ ಆಸ್ಪತ್ರೆ ಹತ್ತಿರ, ಚಿಕ್ಕೋಡಿ. |
| | | 9 | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಹಾಗೂ ಜನಸೇವಾ ಸಂಘ, ಸುಲ್ತಾನಪೂರ ತಾ:ಹುಕ್ಕೇರಿ. ವೃದ್ಧಾಶ್ರಮ, ಇಂದಿರಾನಗರ, ಬೈಲಹೊಂಗಲ |
| | | 10 | ಗ್ರೇಸ್ ಫೌಂಡೇಶನ, ಕ್ಯಾಂಪ್ ಬೆಳಗಾವಿ ಗ್ರೇಸ್ ಫೌಂಡೇಶನ್ ವೃದ್ಧಾಶ್ರಮ, |
| 4 | ಬೀದರ್ | 11 | ರಮಾಬಾಯಿ ಅಂಬೇಡ್ಕರ ಮಹಿಳಾ ಮಂಡಳ ಪಠಾಣಗಲ್ಲಿ ಔರಾದ ತಾ\|\| ಔರಾದ ಬಿ ಜಿ\|\| ಬೀದರ |
| | | 12 | ಅಕ್ಕ ಮಹಾದೇವಿ ಯುವತಿ ಮಂಡಳ ಗಾದಗಿ ಬೀದರ ತಾ\|\| ಜಿ\|\| ಬೀದರ |
| | | 13 | ವಿಶ್ವ ಶಾಂತಿ ಪೌಂಡೆಷನ್ & ಕಲ್ಚರಲ್ ವೆಲ್ಫರ್ ಡೆವಲ್ಪಮೆಂಟ್ ಸೊಸೈಟಿ, ಭೀಮನಗರ ಭಾಲ್ಕಿ ತಾ\|\| ಭಾಲ್ಕಿ ಜಿ\|\| ಬೀದರ |
| 5 | ಬಾಗಲಕೋಟೆ | 14 | ಶ್ರೀ ಕನಕದಾಸ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಹಿರಿಯ ನಾಗರಿಕರ ವೃದ್ಧಾಶ್ರಮ ತೆಗ್ಗಿ, ತಾ: ಬೀಳಗಿ |
| | | 15 | ಶ್ರೀ ಪೂರ್ಣಾನಂದ ಸ್ವಾಮಿಜಿ ಮೆಮೊರಿಯಲ್ ಶಿಕ್ಷಣ ಸಂಸ್ಥೆ ಸಾ\|\| ಸೊಮನಕೊಪ್ಪ, ತಾ\|\| ಬಾದಾಮಿ, |
| | | 16 | ಜಯ ಭಾರತಮಾತೆ ನಗರ ಮತ್ತು ಗ್ರಾಮೀಣ ಸೇವಾಭಿವೃದ್ಧಿ ಸಂಸ್ಥೆ ಜಮಖಂಡಿ |
| 6 | ಚಿಕ್ಕಮಗಳೂರು | 17 | ರೋಟರಿ ಅಂಡ್ ಇನ್ನರ್ ವ್ಹೀಲ್ ಟ್ರಸ್ಟ್, ಚಿಕ್ಕಮಗಳೂರು. |

| | | | |
|---|---|---|---|
| 7 | ಚಿಕ್ಕಬಳ್ಳಾಪುರ | 18 | ನಂದಾದೀಪ ಅಂಗವಿಕಲರ ಶಿಕ್ಷಣ ಮತ್ತು ಪುನಃಶ್ಚೇತನ ಸಂಸ್ಥೆಯ ವತಿಯಿಂದ ಚಿಂತಾಮಣಿ ತಾಲ್ಲೂಕಿನ ಕೈವಾಮುದಲ್ಲಿ ನಡೆಸುತ್ತಿರುವ ಚೈತನ್ಯ ವೃದ್ಧಾಶ್ರಮ ಚಿಕ್ಕಬಳ್ಳಾಪುರ ಜಿಲ್ಲೆ |
| 8 | ಚಿತ್ರದುರ್ಗ | 19 | ಶ್ರೀ ಶಕ್ತಿ ವೃದ್ಧಾಶ್ರಮ, ಚಳ್ಳಕೆರೆ ರಸ್ತೆ, ಹಳೇ ಬೆಂಗಳೂರು ರಸ್ತೆ, ಚಿತ್ರದುರ್ಗ (2016-17ನೇ ಸಾಲಿನಿಂದ ಸ್ಥಗಿತಗೊಂಡಿದೆ) |
| 9 | ಚಾಮರಾಜನಗರ | 20 | ಜ್ಞಾನಸಿಂಧು ವೃದ್ಧಾಶ್ರಮ, ಸಂತೇಮರಳ್ಳಿ, ಚಾಮರಾಜನಗರ ಜಿಲ್ಲೆ |
| 10 | ಧಾರವಾಡ | 21 | ಅಧ್ಯಕ್ಷರು, ಕಾರ್ಯದರ್ಶಿಗಳು, ಶ್ರೀ.ಮೈತ್ರಿ ಮಹಿಳಾ ಮಂಡಳ ವೃದ್ಧಾಶ್ರಮ(ರಿ), ಶ್ರೀ.ಮೈತ್ರಿ ಸ್ಕೂಲ್ & ಸ್ಕಾಲರ್, ಕ್ಯಾನ್ಸರ್ ಹಾಸ್ಪಿಟಲ್ ಹಿಂದೆ, ಸಹ್ಯಾದ್ರಿನಗರ, ನವನಗರ, ಹುಬ್ಬಳ್ಳಿ. ಫೊ.ನಂ.9535104406 |
| | | 22 | ಶ್ರೀ ಶಾರದಾ ಎಜುಕೇಷನ್ ಮತ್ತು ಸೋಸಿಯಲ್ ವೆಲ್ಫೇರ್ ಸೊಸೈಟಿ, |
| 11 | ದಕ್ಷಿಣ ಕನ್ನಡ | 23 | ಅಭಯ ಆಶ್ರಯ, (ರಿ) ಅಸೈಗೋಳಿ, ಕೊಣಾಜಿ, ಮಂಗಳೂರು |
| | | 24 | ಸೇವಾಭಾವಾ ಚಾರಿಟೇಬಲ್ ಟ್ರಸ್ಟ್ (ರಿ), ಮಂಗಳೂರು ದಕ್ಷಿಣ ಕನ್ನಡ ಜಿಲ್ಲೆ ಸೇವಾ ಶ್ರಮ ವೃದ್ಧಾಶ್ರಮ (ಮಂಗಳೂರು ವಿಭಾಗ) |
| | | 25 | ಕ್ಯಾಡ್ ಎಂ. ಎಸ್ ಟ್ರಸ್ಟ್, ಬೆಂಗಳೂರು |
| 12 | ದಾವಣಗೆರೆ | 26 | ಶ್ರೀ ಗುರು ತಿಪ್ಪೇರುದ್ರಸ್ವಾಮಿ ಟ್ರಸ್ಟ ಬಸವಾಪಟ್ಟಣ ಚನ್ನಗಿರಿ ತಾಲ್ಲೂಕು, |
| 13 | ಗದಗ | 27 | ಜಿ.ಎಫ್ ಉಪನಾಳ ಪ್ರತಿಷ್ಠಾನ ಬೆಂಗಳೂರು ಶಾಖೆ, ಲಕ್ಕ್ಮೇಶ್ವರ ಶಾಂತಿಧಾಮ ವೃದ್ಧಾಶ್ರಮ, ಗದಗ |
| | | 28 | ಶ್ರೀ ಜೀವನಜ್ಯೋತಿ ಸೇವಾ ಸಂಸ್ಥೆ(ರಿ), ಬೆಟಗೇರಿ, ಮಂಜುನಾಥ ನಗರ, ಬೆಟಗೇರಿ ರವರು ನಡೆಸುತ್ತಿರುವ ಜೀವನಜ್ಯೋತಿ ವೃದ್ಧಾಶ್ರಮ, ಬೆಟಗೇರಿ |
| 14 | ಹಾಸನ | 29 | ಕಾಮಧೇನು ಸಹಕಾರಿ ವಿದ್ಯಾಶ್ರಮ ನಿಯಮಿತ ಹಾಸನ ರವರ ವತಿಯಿಂದ ನಡೆಯುತ್ತಿರುವ ಚೈತನ್ಯ ಮಂದಿರ (ವೃದ್ಧಾಶ್ರಮ) ಗವೇನಹಳ್ಳಿ, ಹಾಸನ |
| | | 30 | ಶ್ವೇತ ವಿದ್ಯಾ ಸಂಸ್ಥೆ (ರಿ) ದಾಸರಕೊಪ್ಪಲು ಹಾಸನ ರವರ ವತಿಯಿಂದ ನಡೆಯುತ್ತಿರುವ ಶ್ವೇತ ವೃದ್ಧಾಶ್ರಮ, ಹಾಸನ |
| | | 31 | "ಮಧುಶ್ರೀ ಮಹಿಳಾ ಸಮಾಜ (ರಿ) ಅರಕಲಗೂಡು ಹಾಸನ ಜಿಲ್ಲೆ ರವರ ವತಿಯಿಂದ ನಡೆಯುತ್ತಿರುವ ಮಧುಶ್ರೀ ವೃದ್ಧಾಶ್ರಮ, ಅರಕಲಗೂಡು ಹಾಸನ ಜಿಲ್ಲೆ |
| 15 | ಹಾವೇರಿ | 32 | ಶ್ರೀಶಕ್ತಿ ಅಸೋಸಿಯೇಷನ್, ಹಾವೇರಿ. |
| 16 | ಕೊಡಗು | 33 | ಶ್ರೀ ಶಕ್ತಿ ವೃದ್ಧಾಶ್ರಮ,ತ್ಯಾಗರಾಜ ಕಾಲೋನಿ, ಮಡಿಕೇರಿ |
| | | 34 | ಶ್ರೀ ಶಕ್ತಿ ವೃದ್ಧಾಶ್ರಮ, ಗುತ್ತೂರು ಅಂಚೆ, ಮಡಿಕೇರಿ ಕಂದಾಯ ಉಪ ವಿಭಾಗ, ಕೊಡಗು ಜಿಲ್ಲೆ |
| 17 | ಕಲಬುರಗಿ | 35 | ಮಹಾದೇವಿ ತಾಯಿ ಮಹಿಳಾ ವಿದ್ಯಾವರ್ಧಕ ಸಂಘ,ವೃದ್ಧಾಶ್ರಮ ಕಲಬುರಗಿ |
| | | 36 | ಶರಣರ ನಾಡು ಶಿಕ್ಷಣ ಸಂಸ್ಥೆ ಮಹಾದೇವ ನಗರ ಶೇಕರೋಜ ಕಲಬುರಗಿ |
| | | 37 | ವಿಜಯಲಕ್ಷ್ಮಿ ಗ್ರಾಮೀಣಾಭಿವೃದ್ಧಿ ಸ್ವ ಸಹಾಯ ಸಂಘ ತಾರಾಫೈಲ್ ಸೇಡಂ ತಾ. ಕಲಬುರಗಿ ಜಿಲ್ಲೆ |
| 18 | ಕೋಲಾರ | 38 | ದಿವ್ಯಜ್ಯೋತಿ ಎಜುಕೇಷನ್ ಅಂಡ್ ಕಲ್ಚರಲ್ ಸೊಸೈಟಿ (ರಿ), ಶ್ರೀನಿವಾಸಪುರ ತಾ, ಕೋಲಾರ. |

| | | | |
|---|---|---|---|
| | | 39 | ಜಾಗೃತಿ ಸೇವಾ ಸಂಸ್ಥ(ಮುಸಂಜೆ ಮನೆ) ವೃದ್ಧಾಶ್ರಮ, ಜನನಗರ, ಕೋಲಾರ ಟೌನ್ |
| 19 | ಕೊಪ್ಪಳ | 40 | ವಿದ್ಯಾನಂದ ಗುರುಕುಲ ವೃದ್ಧಾಶ್ರಮ, ಕೊಪ್ಪಳ ಜಿಲ್ಲೆ |
| | | 41 | ಕರುಣಾ ರೂರಲ್ ಡೆವಲಪ್ಮೆಂಟ್ ಸೊಸೈಟಿ (ರಿ)<br>ಹೊಸಳ್ಳಿ ರಸ್ಥೆ ಗಂಗಾವತಿ ತಾ\|\|ಗಂಗಾವತಿ ಜಿ\|\|ಕೊಪ್ಪಳ |
| 20 | ಮೈಸೂರು | 42 | ಜೆ.ಎಸ್.ಎಸ್. ವೃದ್ಧಾಶ್ರಮ #915, 5ನೇ ಮುಖ್ಯ ರಸ್ತೆ, ಅರವಿಂದನಗರ ಮೈಸೂರು-57000425 |
| | | 43 | ತಾಯಿ ಮಡಿಲು ವೃದ್ಧಾಶ್ರಮ ಶ್ರೀ ರಾಮಕೃಷ್ಣ ಸೇವಾ ಕೇಂದ್ರ ಟ್ರಸ್ಟ್ ಯಾಚೇನಹಳ್ಳಿ 571101 ಬನ್ನೂರ ಹೊಬಳಿ ಟಿ.ನರಸೀಪುರ ತಾಲ್ಲೂಕು ಮೈಸೂರು |
| | | 44 | ಶ್ರೀ ಮಾತೃಶ್ರೀ ವಿದ್ಯಾ ಶಿಕ್ಷಣ ಸಂಸ್ಥೆ ವಾರ್ಡ ನಂ 13 ಅಕ್ಕಮಹಾದೇವಿ ರಸ್ತೆ ಬಸವೇಶ್ವರ ಬ್ಲಾಕ್ ಕೆ.ಆರ್.ನಗರ ಮೈಸೂರು |
| 21 | ಮಂಡ್ಯ | 45 | ಸೇವಾ ಕಿರಣ ವೃದ್ಧಾಶ್ರಮ, ಸುಭಾಷ್‌ನಗರ, ಮಂಡ್ಯನಗರ (ರಾಜ್ಯ ಅನುದಾನ) |
| 22 | ರಾಯಚೂರು | 46 | ಮಹಾತ್ಮಗಾಂಧಿ ವೃದ್ಧಾಶ್ರಮ ಅಯ್ಯಪ್ಪಸ್ವಾಮಿ ದೇವಾಸ್ಥಾನ ಹತ್ತಿರ, ಲಿಂಗಸೂಗೂರು ಲಿಂಗಸೂಗೂರು ಕಂದಾಯ ಉಪವಿಭಾಗ |
| | | 47 | ಮಧರ್ ಥೆರೀಸಾ ವೃದ್ಧಾಶ್ರಮ ಯರಗೇರಾ ರಾಯಚೂರು. ರಾಯಚೂರು ಕಂದಾಯ ಉಪವಿಭಾಗ |
| 23 | ರಾಮನಗರ | 48 | ಶಾಂತಲಾ ಚಾರಿಟಬಲ್ ಟ್ರಸ್ಟ್ (ರಿ), ದಾರಿದೀಪ ವೃದ್ಧಾಶ್ರಮ, ಕೃಷ್ಣಾಪುರ ದೊಡ್ಡಿ ಗ್ರಾಮ ಮತ್ತು ಅಂಚೆ, ಕೈಲಾಂಚ ಹೋಬಳಿ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ. |
| | | 49 | ಶ್ರೀ ಸತ್ಯಸಾಯಿ ಸೇವಾ ಪ್ರತಿಷ್ಠಾನ (ರಿ), ಸೂರಪ್ಪನ ಹಳ್ಳಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 24 | ಶಿವಮೊಗ್ಗ | 50 | ಶ್ರೀ ಮಾತೆ ಕಾಳಿಕಾದೇವಿ ಮಹಿಳಾ ವಿದ್ಯಾಸಂಸ್ಥೆ ರಿ. ಜೀವನಕಿರಣ ಓಲ್ಡ್ ಏಜ್ ಹೋಂ, ಆಗರದಹಳ್ಳಿ, ಭದ್ರಾವತಿ ತಾಲ್ಲೂಕು, ಶಿವಮೊಗ್ಗ ಜಿಲ್ಲೆ. -577227. |
| | | 51 | ನಂದಾದೀಪ ಅಂಗವಿಕಲರ ಶಿಕ್ಷಣ ಮತ್ತು ಪುನಶ್ಚೇತನ ಸಂಸ್ಥೆ, ಶ್ರೀ ಸಾಯಿ ವೃದ್ಧಾಶ್ರಮ, ಸರ್ಕಾರಿ ಪದವಿ ಪೂರ್ವ ಕಾಲೇಜು ಮುಂಭಾಗ, ಸೊರಬ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ. |
| | | 52 | ಸಿದ್ದೇಶ್ವರ ರೂರಲ್ ಡೆವಲಪ್ಪ್ ಮೆಂಟ್ ಸೊಸೈಟಿ ರಿ., ಶ್ರೀ ಕಾಲಭೈರವೇಶ್ವರ ವೃದ್ಧಾಶ್ರಮ, ರಾಯ್ಕರ್ ನರ್ಸಿಂಗ್ ಹೋಂ ಹಿಂಭಾಗ, ಶಿವಮೊಗ್ಗ. |
| 25 | ತುಮಕೂರು | 53 | ಶ್ರೀ ಸಾಯಿ ವೃದ್ಧಾಶ್ರಮ, ಕಣಿವೇಹಳ್ಳಿ ಗೇಟ್, ತುಮಕೂರು ರಸ್ತೆ, ಪಾವಗಡ |
| | | 54 | ಶ್ರೀ ಶಾರದಾಂಬ ಟ್ರಸ್ಟ್ (ರಿ) ಸಮಾಜ ಸೇವಾ ಭವನ ಬಿಲ್ಡಿಂಗ್, ಪ್ರಶಾಂತನಗರ, ಹೊಸ ಬಡಾವಣೆ, ದೇವರಾಯಪಟ್ಟಣ, ತುಮಕೂರು |
| | | 55 | ಯಶಸ್ವಿನಿ ವಿದ್ಯಾ ಸಂಸ್ಥೆ (ರಿ), ಶ್ರೀನಂದಿ ನಿಲಯ, ೩ನೇ ಕ್ರಾಸ್, ಕಲಾಮಂದಿರ ಹಿಂಭಾಗ, ಕೆ.ಆರ್.ಎಕ್ಸ್ಟೆಂಷನ್, ತಿಪಟೂರು |
| 26 | ಉಡುಪಿ | 56 | ಶಂಕರಪುರ ವಿಶ್ವಾಸದಮನೆ, ಕರುಣಾಲಯ ವೃದ್ಧಾಶ್ರಮ,ಉಡುಪಿ ಜಿಲ್ಲೆ |
| 27 | ಉತ್ತರ ಕನ್ನಡ | 57 | ವಿಶ್ವ ಕಲ್ಯಾಣ, (ರಿ) ಧೂಳಿಕಟ್ಟಿ ಶ್ರೀ ಮಾರುತಿ ದೇವಸ್ಥಾನದ ಹತ್ತಿರ, ಕನ್ಯಾಳ ಅಗಸಿ, ಬೆಟಗೇರಿ ವೃದ್ಧಾಶ್ರಮ |

| | | | |
|---|---|---|---|
| | | 58 | ನವೋದಯ ಅಂಗವಿಕಲರ ಕಲ್ಯಾಣ ಸಂಸ್ಥೆ |
| | | 59 | ಶ್ರೀ ವೀರಭದ್ರ ಚಾರಿಟೇಬಲ್ ಟ್ರಸ್ಟ (ರಿ) |
| 28 | ವಿಜಯಪುರ | 60 | ಶ್ರೀ ಸಿದ್ದೇಶ್ವರ ವಿದ್ಯಾ ಪೀಠ ರಿ ತಾಳಿಕೋಟಿ ವಿಶ್ರಾಂತಿ ವೃದ್ದಾಶ್ರಮ ಜುಮ್ನಾಳ ಕ್ರಾಸ್ ವಿಜಯಪುರ |
| | | 61 | ಶ್ರೀ ವಿಜಯಲಕ್ಷ್ಮಿ ಎಜುಕೇಶನ್ ಎಜುಕೇಶನ ಸೊಸೈಟಿ ಪುಲಿಕೇಶಿ ನಗರ್, ವಿಜಯಪುರ |
| | | 62 | ಡಾಕ್ಟರ್ ಮಲ್ಲಿಕಾರ್ಜುನ್ ಖರ್ಗೆ ಫೌಂಡೇಶನ್ ಕರ್ನಾಟಕ ವೃದ್ದರ ಸೇವಾ ಸಂಸ್ಥೆ ಬಂದಾಳ ಕ್ರಾಸ್ ಸಿಂದಗಿ |
| 29 | ಯಾದಗಿರಿ | 63 | ಅಕ್ಷತಾ ಮಹಿಳಾ ಮಂಡಳಿ, ಯಾದಗಿರಿ |
| | | 64 | ಶ್ರೀ ಮಾತಾ ಮಾಣಿಕೇಶ್ವರಿ ಮಹಿಳಾ ಮಂಡಳ(ರಿ) ಅಲ್ಲಿಪುರ ಯಾದಗಿರಿ |
| 30 | ವಿಜಯನಗರ | 65 | ಎಡೆಯೂರು ಶ್ರೀ ಸಿದ್ದಲಿಂಗೇಶ್ವರ ವಿದ್ಯಾ ಪೀಠ, ಬಳ್ಳಾರಿ |